**All India Radio: Bangalore**
**National Bulletin In Kannada**
**28.04.2025 07.35 a.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**28.04.2025 07.35 a.m.**
**<><><><>**

ಮುಖ್ಯಾಂಶಗಳು

1. ದೇಶದ ಅತ್ಯುನ್ನತ ಪದ್ಮ ಪ್ರಶಸ್ತಿಗಳನ್ನು ಇಂದು ಪ್ರದಾನ ಮಾಡಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು
2. ಪಹಲ್ಗಾಮ್ ಭಯೋತ್ಪಾದಕ ದಾಳಿ ; ಮಿಲಿಟರಿ ಸನ್ನದ್ಧತೆ ಕುರಿತಂತೆ ಸಿಡಿಎಸ್ ಜನರಲ್ ಅನಿಲ್ ಚೌಹಾಣ್, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸಭೆ
3. ಆರೋಗ್ಯವಂತ ಸಮಾಜದಿಂದ ಮುಂದಿನ ೨೫ ವರ್ಷಗಳಲ್ಲಿ ಭಾರತ ೩೦ ಟ್ರಿಲಿಯನ್ ಆರ್ಥಿಕತೆಯಾಗಲಿದೆ - ಕೇಂದ್ರ ಸಚಿವ ಪಿಯೂಷ್ ಗೋಯಲ್
4. ಐಪಿಎಲ್ ಟಿ-೨೦ ಕ್ರಿಕೆಟ್ ; ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ರಾಯಲ್ ಚಾಲೆಂಜರ್ಸ್ ಬೆಂಗಳೂರಿಗೆ ೬ ವಿಕೆಟ್ ಜಯ

<><><><>

ರಾಷ್ಟ್ರಪತಿ ಭವನದಲ್ಲಿ ನಡೆಯಲಿರುವ ಮೊದಲ ನಾಗರಿಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿಂದು ಸಂಜೆ ರಾಷ್ಟ್ರಪತಿ ದ್ರೌಪದಿ ಮುರ್ಮು ಪದ್ಮ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ.

ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಗಳಲ್ಲಿ ಒಂದಾದ ಪದ್ಮ ಪ್ರಶಸ್ತಿಗಳನ್ನು ಪದ್ಮವಿಭೂಷಣ, ಪದ್ಮಭೂಷಣ ಮತ್ತು ಪದ್ಮಶ್ರೀ ಎಂಬ ಮೂರು ವಿಭಾಗಗಳಲ್ಲಿ ನೀಡಲಾಗುತ್ತದೆ. ಕಲೆ, ಸಮಾಜ ಸೇವೆ, ಸಾರ್ವಜನಿಕ ವ್ಯವಹಾರಗಳು, ವಿಜ್ಞಾನ ಮತ್ತು ಎಂಜಿನಿಯರಿಂಗ್, ವ್ಯಾಪಾರ ಮತ್ತು ಕೈಗಾರಿಕೆ, ವೈದ್ಯಕೀಯ, ಸಾಹಿತ್ಯ ಮತ್ತು ಶಿಕ್ಷಣ, ಕ್ರೀಡೆ ಮತ್ತು ನಾಗರಿಕ ಸೇವೆ ಸೇರಿದಂತೆ ವಿವಿಧ ವಿಭಾಗಗಳು ಮತ್ತು ಚಟುವಟಿಕೆಗಳ ಕ್ಷೇತ್ರಗಳಲ್ಲಿ ಪ್ರಶಸ್ತಿಗಳನ್ನು ನೀಡಲಾಗುತ್ತದೆ. ಈ ವರ್ಷದ ಗಣರಾಜ್ಯೋತ್ಸವದ ಮುನ್ನಾದಿನದಂದು, ಸರ್ಕಾರವು ಏಳು ಪದ್ಮವಿಭೂಷಣ, ೧೯ ಪದ್ಮಭೂಷಣ ಮತ್ತು ೧೧೩ ಪದ್ಮಶ್ರೀ ಪ್ರಶಸ್ತಿಗಳನ್ನು ಒಳಗೊಂಡ ೧೩೯ ಪದ್ಮ ಪ್ರಶಸ್ತಿಗಳನ್ನು ಘೋಷಿಸಿತ್ತು. ಪಿಟೀಲು ವಾದಕ ಮತ್ತು ಸಂಯೋಜಕ ಡಾ. ಎಲ್. ಸುಬ್ರಮಣಿಯಂ ಮತ್ತು ಗ್ಯಾಸ್ಟ್ರೋಎಂಟರಾಲಜಿಸ್ಟ್ ಡಿ. ನಾಗೇಶ್ವರ ರೆಡ್ಡಿ. ಪ್ರಮುಖ ಪದ್ಮವಿಭೂಷಣ ಪ್ರಶಸ್ತಿ ಪುರಸ್ಕೃತರಾಗಿದ್ದರೆ, ಖ್ಯಾತ ಸಂಪಾದಕ ಮತ್ತು ಪ್ರಸಾರ ಭಾರತಿ ಅಧ್ಯಕ್ಷ ಎ. ಸೂರ್ಯ ಪ್ರಕಾಶ್, ಚಲನಚಿತ್ರ ನಟರಾದ ಅನಂತ್ ನಾಗ್, ನಂದಮೂರಿ ಬಾಲಕೃಷ್ಣ ಮತ್ತು ಎಸ್. ಅಜಿತ್ ಕುಮಾರ್, ಭರತನಾಟ್ಯ ನೃತ್ಯಗಾರ್ತಿ ಶೋಭನಾ ಚಂದ್ರಕುಮಾರ್ ಮತ್ತು ಮಾಜಿ ಭಾರತೀಯ ಹಾಕಿ ತಂಡದ ನಾಯಕ ಪಿ. ಆರ್. ಶ್ರೀಜೇಶ್ ಪದ್ಮಭೂಷಣ ಪ್ರಶಸ್ತಿ ಪುರಸ್ಕೃತರಾಗಿದ್ದಾರೆ.

<><><><>

ಏಪ್ರಿಲ್ ೨೨ ರಂದು ವಿವಿಧ ರಾಜ್ಯಗಳ ೨೬ ಪ್ರವಾಸಿಗರ ಸಾವಿಗೆ ಕಾರಣವಾದ ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತಿಕ್ರಿಯೆಯಾಗಿ ಮಿಲಿಟರಿ ಸನ್ನದ್ಧತೆಗೆ ಸಂಬಂಧಿಸಿದ ಪ್ರಮುಖ ವಿಷಯಗಳ ಕುರಿತು ಚರ್ಚಿಸಲು ರಕ್ಷಣಾ ಸಚಿವ ರಾಜನಾಥ್ ಸಿಂಗ್ ನಿನ್ನೆ ರಕ್ಷಣಾ ಸಿಬ್ಬಂದಿ ಮುಖ್ಯಸ್ಥ - ಸಿಡಿಎಸ್ ಜನರಲ್ ಅನಿಲ್ ಚೌಹಾಣ್ ಅವರನ್ನು ಭೇಟಿಯಾದರು. ದೆಹಲಿಯಲ್ಲಿರುವ ರಕ್ಷಣಾ ಸಚಿವರ ನಿವಾಸದಲ್ಲಿ ಈ ಸಭೆ ಸುಮಾರು ೪೦ ನಿಮಿಷಗಳ ಕಾಲ ನಡೆಯಿತು. ಜನರಲ್ ಅನಿಲ್ ಚೌಹಾಣ್ ಈ ಸಮಯದಲ್ಲಿ ಭಯೋತ್ಪಾದನೆಯನ್ನು ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ಮಿಲಿಟರಿ ಕಾರ್ಯತಂತ್ರ ಮತ್ತು ಸಿದ್ಧತೆಗಳ ಬಗ್ಗೆ ರಕ್ಷಣಾ ಸಚಿವರಿಗೆ ತಿಳಿಸಿದ್ದಾರೆ ಎಂದು ನಮ್ಮ

ಬಾತ್ಮೀದಾರರು ವರದಿ ಮಾಡಿದ್ದಾರೆ. ಸಭೆಯಲ್ಲಿ ಗಡಿ ಭದ್ರತಾ ಪಡೆ ಅಧಿಕಾರಿಗಳು ಸಹ ಭಾಗವಹಿಸಿದ್ದರು. ಗಡಿ ಭದ್ರತಾ ಪಡೆ ಮಹಾನಿರ್ದೇಶಕ ದಲ್ಜಿತ್ ಸಿಂಗ್ ಚೌಧರಿ ನಿನ್ನೆ ಗೃಹ ಸಚಿವಾಲಯಕ್ಕೆ ಭೇಟಿ ನೀಡಿದರು. ಈ ನಡುವೆ, ಭಾರತೀಯ ನೌಕಾಪಡೆ ನಿನ್ನೆ ಹಡಗು ವಿರೋಧಿ ಕ್ಷಿಪಣಿ ಸಮರಾಭ್ಯಾಸವನ್ನು ಯಶಸ್ವಿಯಾಗಿ ನಡೆಸಿದ್ದು, ದೇಶದ ಕಡಲ ಹಿತಾಸಕ್ತಿಗಳನ್ನು ಕಾಪಾಡಲು ಯಾವುದೇ ಸಮಯದಲ್ಲಿ, ಯುದ್ಧಕ್ಕೆ ಸಂಪೂರ್ಣವಾಗಿ ಸಿದ್ಧವಾಗಿರುವುದಾಗಿ ತಿಳಿಸಿದೆ. ನೌಕಾಪಡೆಯು ನಡೆಸಿದ ಈ ಹಡಗು ವಿರೋಧಿ ಗುಂಡಿನ ಕವಾಯತು ದೀರ್ಘ-ಶ್ರೇಣಿಯ ನಿಖರ ಆಕ್ರಮಣಕಾರಿ ದಾಳಿಗಳನ್ನು ನಡೆಸಲು ವೇದಿಕೆ, ವ್ಯವಸ್ಥೆಗಳು ಮತ್ತು ಸಿಬ್ಬಂದಿಗಳ ಸನ್ನದ್ಧತೆಯನ್ನು ಮರು-ಮೌಲ್ಯಮಾಪನ ಮಾಡಿದೆ ಎಂದು ನೌಕಾಪಡೆ ತಿಳಿಸಿದೆ.

<><><>

ಜಮ್ಮು ಮತ್ತು ಕಾಶ್ಮೀರದಲ್ಲಿ, ಸಚಿವ ಸಂಪುಟ ಕೋರಿಕೆಯ ಮೇರೆಗೆ, ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಇಂದು ಪಹಲ್ಗಾಮ್ ಭಯೋತ್ಪಾದಕ ದಾಳಿಯ ಬಗ್ಗೆ ಚರ್ಚಿಸಲು ವಿಧಾನಸಭೆಯ ಒಂದು ದಿನದ ವಿಶೇಷ ಅಧಿವೇಶನವನ್ನು ಕರೆದಿದ್ದಾರೆ. ಭಯೋತ್ಪಾದನಾ ದಾಳಿಯಲ್ಲಿ ಮೃತಪಟ್ಟವರಿಗೆ ವಿಧಾನಸಭೆಯಲ್ಲಿ ಗೌರವ ನಮನ ಸಲಿಸಲಾಗುವುದು, ನಂತರ ಘಟನೆ ಮತ್ತು ಸಂಬಂಧಿತ ವಿಷಯಗಳ ಕುರಿತು ಚರ್ಚೆ ನಡೆಯಲಿದ್ದು, ದಾಳಿಯನ್ನು ತೀವ್ರವಾಗಿ ಖಂಡಿಸುವ ನಿರ್ಣಯವನ್ನು ಮಂಡಿಸಲಾಗುವುದು. ಏಪ್ರಿಲ್ ೨೩ ರಂದು ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಅವರ ಅಧ್ಯಕ್ಷತೆಯಲ್ಲಿ ಸಭೆ ಸೇರಿದ ಜಮ್ಮು ಮತ್ತು ಕಾಶ್ಮೀರ ಸಚಿವ ಸಂಪುಟ ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಏಪ್ರಿಲ್ ೨೮ ರಂದು ವಿಶೇಷ ವಿಧಾನಸಭೆ ಅಧಿವೇಶನವನ್ನು ಕರೆಯಲು ಲೆಫ್ಟಿನೆಂಟ್ ಗವರ್ನರ್‌ಗೆ ಶಿಫಾರಸು ಮಾಡಿತ್ತು. ಇಂದು ಬೆಳಿಗ್ಗೆ ೧೦.೩೦ ಕ್ಕೆ ವಿಧಾನಸಭೆಯನ್ನು ಕರೆಯಲಾಗಿದ್ದು, ಪ್ರವಾಸಿಗರ ಮೇಲಿನ ಭಯೋತ್ಪಾದಕ ದಾಳಿಯನ್ನು ಖಂಡಿಸುವ ನಿರ್ಣಯವನ್ನು ಅಂಗೀಕರಿಸುವ ಸಾಧ್ಯತೆಯಿದೆ. ಎಲ್ಲಾ ರಾಜಕೀಯ ಪಕ್ಷಗಳು ಭಯೋತ್ಪಾದಕ ದಾಳಿಯನ್ನು ತೀವ್ರವಾಗಿ ಖಂಡಿಸಿರುವುದರಿಂದ ಈ ನಿರ್ಣಯವನ್ನು ಸರ್ವಾನುಮತದಿಂದ ಅಂಗೀಕರಿಸಲಾಗುವ ನಿರೀಕ್ಷೆಯಿದೆ.

<><><>

ವಿಶ್ವದ ಹಲವೆಡೆ ನೆಲೆಸಿರುವ ಅನಿವಾಸಿ ಭಾರತೀಯ ಸಮುದಾಯ ಪಹಲ್ಗಾಮ್ ನಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ಖಂಡಿಸಿ ಪ್ರತಿಭಟನೆ ನಡೆಸುತ್ತಿದೆ. ಮೆಲ್ಬಾರ್ನ್‌ನಲ್ಲಿರುವ ಫೆಡರೇಷನ್ ಸ್ಕ್ವಯರ್ ಲಂಡನ್‌ನಲ್ಲಿರುವ ಪಾಕಿಸ್ತಾನದ ರಾಯಭಾರಿ ಕಚೇರಿ ಕಠ್ಮಂಡುನಲ್ಲಿರುವ ಪಾಕಿಸ್ತಾನಿ ರಾಯಭಾರಿ ಕಚೇರಿ ಫ್ರಾನ್ಸ್‌ನ ಪ್ಯಾರಿಸ್ ಸ್ವಿಜರ್‌ಲ್ಯಾಂಡ್‌ನ ಝ್ಯೂರಿಕ್, ಫಿನ್‌ಲ್ಯಾಂಡ್‌ನ ಹೆಲ್ಸಿಂಕಿ, ಸ್ಪೇನ್ ಹಾಗೂ ಹಲವು ರಾಷ್ಟ್ರಗಳಲ್ಲಿ ಪ್ರತಿಭಟನೆ ನಡೆಸುತ್ತಿರುವುದು ವರದಿಯಾಗಿದೆ. ಪ್ರತಿಭಟನಾಕಾರರು ಈ ಭೀಕರ ಭಯೋತ್ಪಾದನಾ ಘಟನೆಯನ್ನು ತೀವ್ರವಾಗಿ ಖಂಡಿಸಿದ್ದು, ನ್ಯಾಯ ಒದಗಿಸಿಕೊಡಲು ಆಗ್ರಹಿಸಿದ್ದಾರೆ. ಜರ್ಮನಿಯ ಫ್ರಾಂಕ್‌ಫರ್ಟ್‌ನಲ್ಲಿ ನಿನ್ನೆ ಅನಿವಾಸಿ ಭಾರತೀಯ ಸಮುದಾಯ ಆಯೋಜಿಸಿದ್ದ ಪ್ರತಿಭಟನಾ ರ್‍ಯಾಲಿಯಲ್ಲಿ ೩೦೦ಕ್ಕೂ ಅಧಿಕ ಸದಸ್ಯರು ಪಾಲ್ಗೊಂಡರು.

<><><>

ಮುಂದಿನ ೨೫ ವರ್ಷಗಳಲ್ಲಿ ೩೦ ಟ್ರಿಲಿಯನ್ ಆರ್ಥಿಕತೆ ಹೊಂದುವ ಗುರಿಯನ್ನು ಭಾರತ ಆರೋಗ್ಯವಂತ ನಾಗರಿಕ ಸಮಾಜದಿಂದ ಮಾತ್ರ ಸಾಧಿಸಲು ಸಾಧ್ಯ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ನಡೆದ ವಿಶ್ವ ಆರೋಗ್ಯ ಶೃಂಗಸಭೆಯಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರದಿಂದ ಜಾರಿಗೊಳಿಸಲಾದ ಪ್ರತಿ ಉಪಕ್ರಮ ಮತ್ತು ಯೋಜನೆ ನಾಗರಿಕರ ಆರೋಗ್ಯ ಮತ್ತು ಸಮಗ್ರ ಅಭಿವೃದ್ಧಿಗೆ ಪೂರಕವಾಗಿದೆ. ಶಿಕ್ಷಣ ಕ್ಷೇತ್ರದ ಸುಧಾರಣೆ, ಕೈಗೆಟಕುವ ವಸತಿ, ಕುಡಿಯುವ ನೀರು, ಅಡುಗೆ ಅನಿಲ ಸಂಪರ್ಕ ಮತ್ತು ಶೌಚಾಲಯ ಪ್ರವೇಶ ಅಸಂಖ್ಯಾತ ಭಾರತೀಯರ ಜೀವನದ ಗುಣಮಟ್ಟವನ್ನು ಸುಧಾರಿಸಿದೆ ಎಂದರು.

<><><>

ಮುಂಬರುವ ವಿಶ್ವ ಶ್ರವಣ ದೃಶ್ಯ ಮತ್ತು ಮನರಂಜನಾ ಶೃಂಗಸಭೆ - ವೇವ್ಸ್ ಅಡಿಯಲ್ಲಿ ನಡೆದ ಇನ್ನೋವೇಟ್ ಟು ಎಜ್ಯುಕೇಟ್ ಹ್ಯಾಂಡ್ ಹೆಲ್ಡ್ ಡಿವೈಸ್ ಡಿಸೈನ್ ಸ್ಪರ್ಧೆಯ ಅಗ್ರ ೧೦ ಅಂತಿಮ ಸ್ಪರ್ಧಾಳುಗಳನ್ನು ಘೋಷಿಸಲಾಗಿದೆ. ತಂತ್ರಜ್ಞಾನ, ಶಿಕ್ಷಣ ಮತ್ತು ಗೇಮಿಂಗ್ ಕ್ಷೇತ್ರದಲ್ಲಿ ಯುವ ಜನತೆಯಲ್ಲಿ ನಾವೀನ್ಯತೆಗೆ ಉತ್ತೇಜನ ನೀಡಲು ಈ ಸ್ಪರ್ಧೆ ಕೇಂದ್ರೀಕರಿಸಿದೆ. ಉದ್ಯಮ ನಾಯಕರು ತಂತ್ರಜ್ಞರು, ಶಿಕ್ಷಣ ತಜ್ಞರು ಮತ್ತು ವಿನ್ಯಾಸಕಾರರನ್ನು ಒಳಗೊಂಡ ಪರಿಣಿತ ತೀರ್ಪುದಾರರ ಸಮಿತಿ ಕಠಿಣ ಮೌಲ್ಯಮಾಪನದ ನಂತರ ಸುಮಾರು ೧ ಸಾವಿರದ ೮೦೦ಕ್ಕೂ ಅಧಿಕ ನೋಂದಣಿಗಳ ಪೈಕಿ ಅಗ್ರ ೧೦ ಅಂತಿಮ ಸ್ಪರ್ಧಾಳುಗಳನ್ನು ಆಯ್ಕೆ ಮಾಡಿದೆ. ಮೇ ೧ ರಿಂದ ೪ರವರೆಗೆ ನಡೆಯಲಿರುವ ವೇವ್ಸ್ ಶೃಂಗಸಭೆಯಲ್ಲಿ ಈ ಸ್ಪರ್ಧಾಳುಗಳು ತಮ್ಮ ಅಲೋಚನೆಗಳನ್ನು ಪ್ರಸ್ತುತಪಡಿಸಲಿದ್ದಾರೆ.

<><><>

ಮಧ್ಯಪ್ರದೇಶದ ಮಂದ್ಸೌರ್ ಜಿಲ್ಲೆಯಲ್ಲಿ ನಿನ್ನೆ ನಾರಾಯಣಗಢ ಪೊಲೀಸ್ ಠಾಣೆ ವ್ಯಾಪ್ತಿಯ ಕಚರಿಯಾ ಚೌಪತಿ ಗ್ರಾಮದ ಬುಧ-ತಕರ್‌ವಾಟ್ ಕ್ರಾಸಿಂಗ್ ಬಳಿ ಭಕ್ತರನ್ನು ಹೊತ್ತೊಯ್ಯುತ್ತಿದ್ದ ವ್ಯಾನ್ ತೆರೆದ ಬಾವಿಗೆ ಬಿದ್ದು ಕನಿಷ್ಠ ೧೧ ಜನರು ಸಾವನ್ನಪ್ಪಿದ್ದಾರೆ. ಈ ಘಟನೆಯಲ್ಲಿ ಇಬ್ಬರು ಚಿಕ್ಕ ಮಕ್ಕಳು ಸೇರಿದಂತೆ ಇತರ ನಾಲ್ವರು ತೀವ್ರ ಗಾಯಗೊಂಡಿದ್ದಾರೆ. ಬೈಕ್‌ಗೆ ಡಿಕ್ಕಿ ಹೊಡೆದ ನಂತರ ನಿಯಂತ್ರಣ ತಪ್ಪಿದ ವಾಹನ ಅಂತಿಮವಾಗಿ ೧೫ ಅಡಿ ಆಳದ ಬಾವಿಗೆ ಉರುಳಿದೆ ಎಂದು ಪೊಲೀಸರು ತಿಳಿಸಿದ್ದಾರೆ.

<><><>

ಪಾಕಿಸ್ತಾನ್-ಅಫ್ಘಾನಿಸ್ತಾನ್ ಗಡಿಯ ಮೂಲಕ ವಾಯುವ್ಯ ಪಾಕಿಸ್ತಾನದ ಖೈಬರ್ ಪಖ್ತುನ್ಖ್ವಾ ಗೆ ನುಸುಳಲು ಯತ್ನಿಸುತ್ತಿದ್ದ ನಿಷೇಧಿತ ತೆಹರಿಕ್ ಎ ತಾಲಿಬಾನ್ ಪಾಕಿಸ್ತಾನ್ ಟಿಟಿಪಿ ಸಂಘಟನೆಗೆ ಸೇರಿದ ೫೪ ಭಯೋತ್ಪಾದಕರನ್ನು ಪಾಕಿಸ್ತಾನ್ ಭದ್ರತಾ ಪಡೆಗಳು ಹತ್ಯೆ ಮಾಡಿದೆ ಎಂದು ಮಿಲಿಟರಿ ಮಾಧ್ಯಮ ವಿಭಾಗ ವರದಿ ಮಾಡಿದೆ. ಅಂತರ್ ಸೇವೆಗಳ ಸಾರ್ವಜನಿಕ ಸಂಪರ್ಕ ಇಲಾಖೆ ಬಿಡುಗಡೆಗೊಳಿಸಿರುವ ಹೇಳಿಕೆಯಲ್ಲಿ ಏಪ್ರಿಲ್ ೨೫-೨೬ ಮತ್ತು ೨೬ರ ಮಧ್ಯರಾತ್ರಿ ಭದ್ರತಾಪಡೆಗಳು ಭಯೋತ್ಪಾದಕರ ದೊಡ್ಡ ಗುಂಪಿನ ಚಲನವಲನವನ್ನು ಪತ್ತೆ ಹಚ್ಚಿದರು. ಬಳಿಕ ನಡೆದ ಕಾರ್ಯಾಚರಣೆಯಲ್ಲಿ ೫೪ ಭಯೋತ್ಪಾದಕರ ಹತ್ಯೆ ಮಾಡಲಾಗಿದೆ. ಈ ವೇಳೆ ಭಾರೀ ಪ್ರಮಾಣದ ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ತಿಳಿಸಿದೆ.

<><><>

ದೆಹಲಿಯಲ್ಲಿ ನಿನ್ನೆ ನಡೆದ ಏಷ್ಯನ್ ಯೋಗಾಸನ ಕ್ರೀಡಾ ಚಾಂಪಿಯನ್‌ಶಿಪ್‌ನಲ್ಲಿ ಭಾರತ ಉತ್ತಮ ಪ್ರದರ್ಶನ ನೀಡಿದ್ದು, ದಾಖಲೆಯ ೮೩ ಚಿನ್ನದ ಪದಕಗಳನ್ನು ಗಳಿಸಿ ಪದಕ ಪಟ್ಟಿಯಲ್ಲಿ ಅಗ್ರಸ್ಥಾನಕ್ಕೆ ಏರಿದೆ. ಆತಿಥೇಯರು ಮೂರು ಬೆಳ್ಳಿ ಮತ್ತು ಒಂದು ಕಂಚಿನ ಪದಕವನ್ನು ಗೆದ್ದು ೮೬ ಪದಕಗಳೊಂದಿಗೆ ಮೊದಲಸ್ಥಾನಕ್ಕೇರಿದರು. ಮೂರು ಚಿನ್ನ, ಮೂರು ಬೆಳ್ಳಿ ಮತ್ತು ನಾಲ್ಕು ಕಂಚಿನ ಪದಕಗಳನ್ನು ಗೆದ್ದ ಜಪಾನ್ ಕೂಡ ಉತ್ತಮ ಸಾಧನೆ ಮಾಡಿತು. ಮಂಗೋಲಿಯಾ, ಓಮನ್ ಮತ್ತು ನೇಪಾಳಗಳು ಮೊದಲ ಐದು ಸ್ಥಾನಗಳಲ್ಲಿ ಸ್ಥಾನ ಪಡೆದಿವೆ. ಉಜ್ಬೇಕಿಸ್ತಾನ್, ಶ್ರೀಲಂಕಾ, ಥೈಲ್ಯಾಂಡ್, ಕಝಾಕಿಸ್ತಾನ್ ಮತ್ತು ಭೂತಾನ್ ದೇಶಗಳು ಸಹ ಉತ್ತಮ ಪ್ರದರ್ಶನಗಳನ್ನು ನೀಡಿದವು.

<><><>

ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಐಪಿಎಲ್ ಟಿ೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಡೆಲ್ಲಿ ಕ್ಯಾಪಿಟಲ್ಸ್ ತಂಡವನ್ನು ೬ ವಿಕೆಟ್‌ಗಳಿಂದ ಸೋಲಿಸಿದೆ. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಡೆಲ್ಲಿ ಕ್ಯಾಪಿಟಲ್ಸ್ ನಿಗದಿತ ೨೦ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೧೬೨ ರನ್

ಗಳಿಸಿತು. ೧೬೩ ರನ್‌ಗಳ ಗುರಿಯನ್ನು ಬೆನ್ನಟ್ಟಿದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು ೧೮.೩ ಓವರ್‌ಗಳಲ್ಲಿ ನಾಲ್ಕು ವಿಕೆಟ್ ನಷ್ಟಕ್ಕೆ ೧೬೫ ರನ್ ಗಳಿಸಿ ಗೆಲುವು ತನ್ನದಾಗಿಸಿಕೊಂಡಿತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು. <><>